# ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ
## ಮುಕ್ತಗಂಗೋತ್ರಿ, ಮೈಸೂರು-570006

ದಿನಾಂಕ 27.02.2019 ರಂದು ಸಂಜೆ: 04.00 ಗಂಟೆಗೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಆಡಳಿತ ಭವನದ ಸಭಾಂಗಣದಲ್ಲಿ ಮಾನ್ಯ ಕುಲಪತಿಗಳಾದ ಪ್ರೊ. ಡಿ.ಶಿವಲಿಂಗಯ್ಯ ರವರ ಅಧ್ಯಕ್ಷತೆಯಲ್ಲಿ ನಡೆದ 6ನೇ ವಿಶೇಷ ಶೈಕ್ಷಣಿಕ ಮಂಡಳಿ ಸಭೆಯ ನಡಾವಳಿ.

| ಉಪಸ್ಥಿತರು | |
|---|---|
| **ಪ್ರೊ. ಡಿ. ಶಿವಲಿಂಗಯ್ಯ**<br>ಮಾನ್ಯ ಕುಲಪತಿಗಳು ಹಾಗೂ<br>ಶೈಕ್ಷಣಿಕ ಮಂಡಳಿಯ ಅಧ್ಯಕ್ಷರು,<br>ಕರಾಮುವಿ, ಮೈಸೂರು. | **ಪ್ರೊ. ರಮೇಶ್. ಬಿ**<br>ಕುಲಸಚಿವರು<br>ಕರಾಮುವಿ,<br>ಮೈಸೂರು. |
| **ಪ್ರೊ. ಜಗದೀಶ**<br>ಡೀನ್ (ಶೈಕ್ಷಣಿಕ) ಹಾಗೂ<br>ಶೈಕ್ಷಣಿಕ ಮಂಡಳಿ ಸದಸ್ಯರು<br>ಕರಾಮುವಿ, ಮೈಸೂರು. | **ಡಾ. ಎ. ಖಾದರ್ ಪಾಷಾ**<br>ಹಣಕಾಸು ಅಧಿಕಾರಿಗಳು ಹಾಗೂ<br>ಶೈಕ್ಷಣಿಕ ಮಂಡಳಿ ಸದಸ್ಯರು<br>ಕರಾಮುವಿ, ಮೈಸೂರು. |
| **ಪ್ರೊ. ಡಿ.ಬಿ. ಬಸವರಾಜ್**<br>ಡೀನ್ (ಅಧ್ಯಯನ ಕೇಂದ್ರಗಳು) ಹಾಗೂ<br>ಶೈಕ್ಷಣಿಕ ಮಂಡಳಿ ಸದಸ್ಯರು<br>ಕರಾಮುವಿ, ಮೈಸೂರು. | **ಡಾ. ಎಂ.ಎಸ್. ರಮಾನಂದ**<br>ಕುಲಸಚಿವ (ಪರೀಕ್ಷಾಂಗ) ಹಾಗೂ<br>ಶೈಕ್ಷಣಿಕ ಮಂಡಳಿ ಸದಸ್ಯರು<br>ಕರಾಮುವಿ, ಮೈಸೂರು. |
| **ಸಭೆಗೆ ಗೈರು ಹಾಜರಾದ ಸದಸ್ಯರು**<br>**ಡಾ|| ಲಕ್ಷ್ಮಿ.ಎನ್**<br>ಮುಖ್ಯಸ್ಥರು, ಶಿಕ್ಷಣ ಶಾಸ್ತ್ರ ವಿಭಾಗ ಹಾಗೂ<br>ಶೈಕ್ಷಣಿಕ ಮಂಡಳಿ ಸದಸ್ಯರು<br>ಕರಾಮುವಿ, ಮೈಸೂರು | |

ಸಭೆಗೆ ಹಾಜರಾಗಿದ್ದ ಸದಸ್ಯರುಗಳನ್ನು ಮಾನ್ಯ ಕುಲಪತಿಗಳು ಸ್ವಾಗತಿಸುವುದರೊಂದಿಗೆ ಸಭೆಯು ಪ್ರಾರಂಭವಾಯಿತು. ಮುಂದುವರೆದು ಮಾನ್ಯ ಕುಲಪತಿಗಳು ಮಾತನಾಡುತ್ತಾ ಶೈಕ್ಷಣಿಕ ಮಂಡಳಿ ಸಭೆಯನ್ನು ಕರೆದಿರುವ ಉದ್ದೇಶವನ್ನು ಸದಸ್ಯರುಗಳ ಗಮನಕ್ಕೆ ತಂದರು.

27/2 — ಕುಲಸಚಿವರು ಹಾಗೂ ಸದಸ್ಯ ಕಾರ್ಯದರ್ಶಿಗಳು

27/2 — ಕುಲಪತಿಗಳು ಹಾಗೂ ಅಧ್ಯಕ್ಷರು

ವಿಷಯ ಸಂಖ್ಯೆ : 6:01

ವಿಷಯ: ವಿಶ್ವವಿದ್ಯಾನಿಲಯದ 16ನೇ ಘಟಿಕೋತ್ಸವದಲ್ಲಿ ಅರ್ಹ ಪಿಹೆಚ್.ಡಿ. ಅಭ್ಯರ್ಥಿಗಳಿಗೆ ಪದವಿಯನ್ನು ಘೋಷಿಸಿ ಪ್ರಮಾಣಪತ್ರಗಳನ್ನು ವಿತರಿಸುವ ಸಂಬಂಧ ಅನುಮೋದನೆ ನೀಡುವ ಬಗೆಗೆ.

ಕರ್ನಾಟಕ ರಾಜ್ಯ ಮುಕ್ತವಿಶ್ವವಿದ್ಯಾನಿಲಯದಲ್ಲಿ 16ನೇ ಘಟಿಕೋತ್ಸವ ಸಮಾರಂಬವು ದಿನಾಂಕ 05.03.2019ರಂದು ನೆಡೆಯುತ್ತಿದ್ದು ಸದರಿ ಸಮಾರಂಭದಲ್ಲಿ ವಿವಿಯ ವಿವಿಧ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳ ಸಂಬಂಧಪಟ್ಟ ಪ್ರಾಧ್ಯಾಪಕರ ಮಾರ್ಗದರ್ಶನದಲ್ಲಿ ಪಿ.ಹೆಚ್‌ಡಿ ಪದವಿ ಪೂರ್ಣಗೊಳಿಸಿರುವ ಮತ್ತು ಅಧಿಸೂಚನೆ ಆಗಿರುವ ಹಿನ್ನಲೆಯಲ್ಲಿ ಅರ್ಹ ಅಭ್ಯರ್ಥಿಗಳಿಗೆ ಪದವಿಯನ್ನು ಘೋಷಿಸಿ ಪ್ರಮಾಣಪತ್ರಗಳನ್ನು ವಿತರಿಸುವ ಸಂಬಂಧ ಚರ್ಚೆ ಮತ್ತು ನಿರ್ಣಯಕ್ಕಾಗಿ ವಿವಿ ಶೈಕ್ಷಣಿಕ ಮಂಡಳಿ ಸಭೆಗೆ ಸದರಿ ವಿಷಯವನ್ನು ಮಂಡಿಸಿದೆ.

ಅಡಕ: ಪಿ.ಹೆಚ್‌ಡಿ ಪದವಿ ಪೂರ್ಣಗೊಳಿಸಿರುವ ಮತ್ತು ಅಧಿಸೂಚನೆ ಆಗಿರುವ ಅಭ್ಯರ್ಥಿಗಳ ಪಟ್ಟಿಯನ್ನು ಅನುಬಂಧದಲ್ಲಿ ಲಗತ್ತಿಸಿದೆ

ತೀರ್ಮಾನ : ಕರಾಮುವಿಯಲ್ಲಿ ಪಿ.ಹೆಚ್‌ಡಿ ಕಾರ್ಯಕ್ರಮವನ್ನು ಮುಕ್ತಾಯಗೊಳಿಸಿದ ಹತ್ತು ಅರ್ಹ ವಿದ್ಯಾರ್ಥಿಗಳು ಅಧಿಸೂಚನೆಯನ್ನು ಪಡೆದಿದ್ದು, ಅವರುಗಳಿಗೆ 16ನೇ ಘಟಿಕೋತ್ಸವದಲ್ಲಿ ಪಿಹೆಚ್.ಡಿ. ಪದವಿಯನ್ನು ಮತ್ತು ಪ್ರಮಾಣಪತ್ರವನ್ನು ಪ್ರಧಾನ ಮಾಡಲು ಕ್ರಮ ಕೈಗೊಳ್ಳುವಂತೆ ಅನುಮೋದಿಸಲಾಯಿತು.

-----

ವಿಷಯ ಸಂಖ್ಯೆ : 6:02

ವಿಷಯ: **2018–19ನೇ ಸಾಲಿನಿಂದ ಕರಾಮುವಿಯಲ್ಲಿ ಪಿಹೆಚ್.ಡಿ ಕಾರ್ಯಕ್ರಮವನ್ನು ಕರಾಮುವಿ ಪಿಹೆಚ್.ಡಿ ಅಧ್ಯಾದೇಶ 2018ರಂತೆ ಆರಂಭಿಸುವ ಕುರಿತು**

2018–19ನೇ ಸಾಲಿನಿಂದ ಕರಾಮುವಿಯಲ್ಲಿ ಪಿಹೆಚ್.ಡಿ (Regular Mode) ಕಾರ್ಯಕ್ರಮವನ್ನು ಆರಂಭಿಸಲು ಉದ್ದೇಶಿಸಿದೆ. ಈ ಕಾರ್ಯಕ್ರಮವು ಕರಾಮುವಿ ಪಿಹೆಚ್.ಡಿ ಅಧ್ಯಾದೇಶ 2018ರ ಅನುಗುಣವಾಗಿ ಇರುತ್ತದೆ. ಈ ಕಾರ್ಯಕ್ರಮಕ್ಕೆ ಈಗಾಗಲೇ ಅರ್ಹ ಆಂತರಿಕ ಅಧ್ಯಾಪಕರಿಂದ ಮಾರ್ಗದರ್ಶಕರಾಗಲು ಅರ್ಜಿ ಆಹ್ವಾನಿಸಿದ್ದು, ಅವರುಗಳು ನಿಗದಿತ ವೇಳೆಗೆ ಅರ್ಜಿ ಸಲ್ಲಿಸಿರುತ್ತಾರೆ.

27/2

ಕುಲಸಚಿವರು ಹಾಗೂ
ಸದಸ್ಯ ಕಾರ್ಯದರ್ಶಿಗಳು

27/2

ಕುಲಪತಿಗಳು ಹಾಗೂ ಅಧ್ಯಕ್ಷರು

ಸದರಿ ವಿಷಯವನ್ನು ಸಂಬಂಧಪಟ್ಟ ಅಧ್ಯಯನ ಮಂಡಳಿಯಲ್ಲಿ ಮಂಡಿಸಲ್ಪಟ್ಟಿದ್ದು ಶಿಫಾರಸ್ಸುಗಳು ಬಂದಿರುತ್ತವೆ. ಒಟ್ಟು 22 ವಿಭಾಗಗಳು ಸಂಶೋಧನಾ ಕಾರ್ಯಕ್ರಮಗಳನ್ನು ನಡೆಸುವ ಉದ್ದೇಶವಿದ್ದು ಸುಮಾರು 40 ಅರ್ಹ ಅಧ್ಯಾಪಕರುಗಳಿಗೆ ಸಂಶೋಧನಾ ಮಾರ್ಗದರ್ಶಕರಾಗಿ ಮಾನ್ಯತೆ ನೀಡುವ ಸಂಬಂಧ ಮತ್ತು ಅಧ್ಯಾದೇಶದಂತೆ ಇತರ ಪ್ರಕ್ರಿಯೆಗಳನ್ನು ಪ್ರಾರಂಭಿಸುವ ಕುರಿತು ಒಪ್ಪಿಗೆ ಪಡೆಯಲು ಸದರಿ ವಿಷಯವನ್ನು ವಿವಿ ಶೈಕ್ಷಣಿಕ ಸಭೆಯಲ್ಲಿ ಮಂಡಿಸಿದ್ದು ಅನುಮೋದನೆ ಕೋರಿದೆ.

**ತೀರ್ಮಾನ 1 :** ಯುಜಿಸಿ. ಸಾರ್ವಜನಿಕ ತಿಳುವಳಿಕೆ ಪತ್ರ ಸಂಖ್ಯೆ: F. No 2-1/2017(DEB-III) ದಿನಾಂಕ: 14.11.2018ರ ಪ್ರಕಾರ, ಕರಾಮುವಿಯು ( ರಾಜ್ಯ ವಿಶ್ವವಿದ್ಯಾನಿಲಯ) ವಿವಿಧ ಅರ್ಹ ವಿಭಾಗಗಳಲ್ಲಿ ಪಿಹೆಚ್.ಡಿ ಕಾರ್ಯಕ್ರಮವನ್ನು Regulr Mode ಪ್ರಾರಂಭಿಸಲು ಕರಾಮುವಿ ಪಿಹೆಚ್.ಡಿ ಅಧ್ಯಾದೇಶ 2018ನ್ನು ಅಧಿಸೂಚನೆ ಹೊರಡಿಸಲಾಗಿದ್ದು ಇದರ ಪ್ರಕಾರ ಪ್ರಕ್ರಿಯೆಯನ್ನು ಆರಂಭಿಸಲು ಮತ್ತು ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಯಿತು.

**ತೀರ್ಮಾನ 2.** ಅರ್ಹ ವಿಭಾಗಗಳನ್ನು **ಅಧ್ಯಯನ ಮತ್ತು ಸಂಶೋಧನಾ ವಿಭಾಗ** ಎಂದು ನಾಮಕರಣ ಮಾಡಲು ಕ್ರಮ ಕೈಗೊಳ್ಳುವಂತೆ ಅನುಮೋದನೆ ನೀಡಲಾಯಿತು.

ಅಂತಿಮವಾಗಿ 6ನೇ ವಿಶೇಷ ಶೈಕ್ಷಣಿಕ ಮಂಡಳಿ ಸಭೆಗೆ ಆಗಮಿಸಿ ಮಂಡಿತ ವಿಷಯಗಳ ಬಗ್ಗೆ ಚರ್ಚಿಸಿ, ತಮ್ಮ ಅಮೂಲ್ಯ ಸಲಹೆ, ಸೂಚನೆಗಳನ್ನು ನೀಡಿ, ಸಭೆಯನ್ನು ಸೂಸೂತ್ರವಾಗಿ ನಡೆಸಿಕೊಟ್ಟಿದ್ದಕ್ಕೆ ಎಲ್ಲ ಸದಸ್ಯರುಗಳಿಗೂ ಮಾನ್ಯ ಕುಲಪತಿಗಳು ಧನ್ಯವಾದಗಳನ್ನು ತಿಳಿಸುವುದರೊಂದಿಗೆ ಸಭೆಯು ಮುಕ್ತಾಯಗೊಂಡಿತು.

27/12

ಕುಲಸಚಿವರು ಹಾಗೂ
ಸದಸ್ಯ ಕಾರ್ಯದರ್ಶಿಗಳು

27/12

ಕುಲಪತಿಗಳು ಹಾಗೂ ಅಧ್ಯಕ್ಷರು